## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 164, ವಿದ್ಯಾಪೀಠ ಬೆಂಗಳೂರು.

ಸಂಖ್ಯೆ: ಸ.ಅ/ವಾ-164/ಪಿಆರ್//2021-22 ದಿನಾಂಕ: 23-11-2021

### ನವಂಬರ್ ಮಾಹೆಯ ವಾರ್ಡ್ ಸಮಿತಿ ಸಭೆಯ ನಡಾವಳಿಗಳು

***********

ವಿಷಯ: ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/2020-21, ದಿನಾಂಕ: 21-09-2020ರ ಆದೇಶದಂತೆ ದಿನಾಂಕ: 20-11-2021 ರಂದು ವಾರ್ಡ್ ಸಂಖ್ಯೆ: 164, ವಿದ್ಯಾಪೀಠದಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಸ್ಥಳ : ಬಿಬಿಎಂಪಿ ವಾರ್ಡ್ ಕಛೇರಿ, ವಿದ್ಯಾಪೀಠ ಸರ್ಕಲ್ ಹತ್ತಿರ

ಸಮಯ : ಬೆಳಿಗ್ಗೆ 11.00 ಗಂಟೆಗೆ

**ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಆರ್. ವಿಜಯ್‌ಕುಮಾರ್ | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2 | ಶ್ರೀ ಜನಾರ್ಧನ್ | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಗಿರಿನಗರ) ಉಪವಿಭಾಗ |
| 3 | ಶ್ರೀ ಟಿ. ಕೃಷ್ಣಮೂರ್ತಿ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್-164, ವಿದ್ಯಾಪೀಠ |
| 4 | ಶ್ರೀ ವಿಷಕಂಠಯ್ಯ ಹೆಚ್.ಎನ್ | ಕೆಲಸ ಪರಿವೀಕ್ಷಕರು, ವಾರ್ಡ್-164, ವಿದ್ಯಾಪೀಠ |
| 5 | ಶ್ರೀ ಎಂ. ಸುರೇಶ್ | ಕಂದಾಯ ವಸೂಲಿಗಾರರು |
| 6 | ಡಾ॥ ಸುರ್ಜಿತ್ .ಟಿ | ವೈದ್ಯಾಧಿಕಾರಿಗಳು |
| 7 | ಶ್ರೀ ಸುನಿಲ್ | ಹಿರಿಯ ಆರೋಗ್ಯ ಪರಿವೀಕ್ಷಕರು |
| 8 | ಶ್ರೀ ಮಹೇಶ್ | ಮಾರ್ಷಲ್ |
| 9 | ಜಯರಾಮೇ ಗೌಡ | ಸ್ಯಾನಿಟರಿ ಧಫೇದಾರ್ |
| 10 | ತ್ಯಾಗರಾಜ್ | ಅರಣ್ಯ ಇಲಾಖೆ |
| 11 | ಶ್ರೀ ಕುಮಾರ್ | ಸಾರ್ವಜನಿಕರು |
| 12 | ಡಾ.ವಿ.ನಾಗರಾಜ್ | ಗೌರವ ಕಾರ್ಯದರ್ಶಿಗಳು, ಶ್ರೀ ವಿವೇಕಾನಂದ ಕಲಾ ಕೇಂದ್ರ |

ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳಾದ ಶ್ರೀ ಆರ್. ವಿಜಯ್‌ಕುಮಾರ್ ರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿಗಳಿಗೆ ಮತ್ತು ಸದಸ್ಯರಿಗೆ ಸ್ವಾಗತ ಕೋರುವುದರೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು. ಸಭೆಯಲ್ಲಿ ಅಕ್ಟೋಬರ್ ತಿಂಗಳ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಹಾಗೂ ಕೈಗೊಂಡ ಕ್ರಮಗಳ ಬಗ್ಗೆ ಸಭೆಯಲ್ಲಿ ವಾರ್ಡ್ ಅಭಿಯಂತರರು ವರದಿಯನ್ನು ಓದಿ ತಿಳಿಸಿದರು.

1. ತ್ಯಾಜ್ಯ ಸಂಗ್ರಹಿಸುವ ಎಲ್ಲಾ ವಾಹನಗಳಿಗೆ ಜಿ.ಪಿ.ಎಸ್ ಟ್ಯಾಗ್ ಅಳವಡಿಸಲಾಗಿರುತ್ತದೆ ಎಂದು ಸಭೆಯಲ್ಲಿ ಹಾಜರಿದ್ದ ಹಿರಿಯ ಆರೋಗ್ಯ ಪರಿವೀಕ್ಷಕರು ಸಭೆಗೆ ತಿಳಿಸಿರುತ್ತಾರೆ 25 ದಿನಗಳಿಂದ ಅಧಿಕ ಮಳೆ ಪ್ರಯುಕ್ತ ತ್ಯಾಜ್ಯ ಸಂಗ್ರಹಿಸುವ ಸ್ಥಳಗಳಲ್ಲಿ ತ್ಯಾಜ್ಯ ವಿಲೇವಾರಿಯಲ್ಲಿ ವ್ಯತ್ಯಾಸವಾಗಿರುತ್ತದೆ. ಕಸ ವಿಲೇವಾರಿಯಲ್ಲಿ 23 ಆಟೋ ಟಿಪ್ಪರ್, 2 ಕಾಂಪ್ಯಾಕ್ಟರ್ ಕಾರ್ಯನಿರ್ವಹಿಸುತ್ತಿರುತ್ತವೆ. 81 ಡಿ.ಪಿ.ಎಸ್ ಪೌರಕಾರ್ಮಿಕರು, 11

ಖಾಯಂ ಪೌರಕಾರ್ಮಿಕರು ಮಳೆಯಲ್ಲಿ ಸಹ ಸಮರ್ಪಕವಾಗಿ ಕಾರ್ಯನಿರ್ವಹಿಸಿರುತ್ತಾರೆ ಎಂದು ಕಿರಿಯ ಆರೋಗ್ಯ ಪರಿವೀಕ್ಷಕರು ಸಭೆಯಲ್ಲಿ ತಿಳಿಸಿರುತ್ತಾರೆ.

2. ರೋಗಗಳು ಹರಡದಂತೆ ಸೊಳ್ಳೆ ಔಷಧಿ ಸಿಂಪಡಣೆ ಕಾರ್ಯ ಸಮರ್ಪಕವಾಗಿ ಮಾಡಲಾಗಿರುತ್ತದೆ. ನವಂಬರ್ ತಿಂಗಳ 5ನೇ ತಾರೀಖಿನಂದು ದಕ್ಷಿಣ ವಲಯದಲ್ಲಿ 135 ಮಿ.ಮೀ ಮಳೆ ವರದಿಯಾಗಿರುತ್ತದೆ. ಈ ಸಮಯದಲ್ಲಿ ಯಾವುದೇ ಅವಘಡ, ಅನಾಹುತಗಳು ಸಂಭವಿಸದಂತೆ ಕ್ರಮವಹಿಸಲಾಗಿರುತ್ತದೆ ಮತ್ತು ಮಳೆಯಿಂದ ಬಿದ್ದ ಮರಗಳ ರೆಂಬೆ ಕೊಂಬೆಗಳನ್ನು ಸರಿಯಾದ ಸಮಯದಲ್ಲಿ ತೆರವುಗೊಳಿಸಲಾಗಿರುತ್ತದೆ. ವಾರ್ಡ್ ನಿವಾಸಿಗಳಿಗೆ ಮಳೆಯಿಂದ ತೊಂದರೆಯಾಗದಂತೆ ಎಲ್ಲಾ ರೀತಿಯ ಸೂಕ್ತ ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ. ಘನತ್ಯಾಜ್ಯಕ್ಕೆ ಸಂಬಂಧಿಸಿದಂತೆ ಎಲ್ಲಾ ಪೌರಕಾರ್ಮಿಕರು 08 ಗಂಟೆಗಳ ಕಾಲ ಸತತವಾಗಿ ಮಳೆಯಲ್ಲಿ ಕಾರ್ಯನಿರ್ವಹಿಸಿದ್ದು, ಯಾವುದೇ ದೂರುಗಳು ಬರದಂತೆ ಕ್ರಮವಹಿಸಿ ಕಸ ವಿಲೇವಾರಿ ಮಾಡಿರುತ್ತಾರೆ ಎಂದು ಕಿರಿಯ ಆರೋಗ್ಯ ಪರಿವೀಕ್ಷಕರು ಸಭೆಯಲ್ಲಿ ತಿಳಿಸಿರುತ್ತಾರೆ.

3. ಬೆಸ್ಕಾಂ ಸಂಸ್ಥೆಯ ವತಿಯಿಂದ ಕೇಬಲ್‌ಗಳನ್ನು ಅಳವಡಿಸಲು ರಸ್ತೆಗಳನ್ನು ಅಗೆದಿದ್ದು, ಸದರಿ ರಸ್ತೆಗಳನ್ನು ಕೂಡಲೇ ದುರಸ್ಥಿಗೊಳಿಸಲು ಸಭೆಯಲ್ಲಿ ಸೂಚಿಸಿಲಾಯಿತು.

4. ವಾರ್ಡ್ ವ್ಯಾಪ್ತಿಯಲ್ಲಿರುವ ಎಲ್ಲಾ ಬೋರ್‌ವೆಲ್‌ಗಳಿಗೆ ವಿದ್ಯುತ್ ಮೀಟರ್ ಅಳವಡಿಸಲು ಸೂಚಿಸಲಾಯಿತು ಮತ್ತು ಬೀದಿದೀಪಗಳ ಅಳವಡಿಕೆ ಬಗ್ಗೆ ವರದಿ ನೀಡಲು ತಿಳಿಸಿರುತ್ತಾರೆ. ವಿದ್ಯುತ್ ಬಾಕಿ ಬಿಲ್ಲುಗಳ ವರದಿ ನೀಡಲು ವಾರ್ಡ್ ಸಮಿತಿ ಅಧ್ಯಕ್ಷರು ಬೆಸ್ಕಾಂ ಅಧಿಕಾರಿಗಳಿಗೆ ಸಭೆಯಲ್ಲಿ ತಿಳಿಸಿರುತ್ತಾರೆ.

5. ಆರೋಗ್ಯ ಇಲಾಖೆಯಿಂದ ವೈದ್ಯಾಧಿಕಾರಿಗಳು ಸಭೆಗೆ ಹಾಜರಿದ್ದು, ಪ್ರತಿ ದಿನ 30 ರಿಂದ 50 ಕರೋನ ಟೆಸ್ಟ್ ನಡೆಯುತ್ತಿದ್ದು, ರೋಗಿಗಳ ಸಂಖ್ಯೆ ಕಡಿಮೆಯಾಗಿರುತ್ತದೆ ಹಾಗೂ ಕರೋನ ಟೆಸ್ಟ್‌ಗಳನ್ನು ಪ್ರತಿನಿತ್ಯವು ನಡೆಸುತ್ತಿದ್ದು, ಅದರಲ್ಲಿ 55 ಸೋಂಕು ಪೀಡಿತರನ್ನು ಗುರುತಿಸಿ, ಚಿಕಿತ್ಸೆಗೆ ಒಳಪಡಿಸಿದ್ದು, ಚಿಕಿತ್ಸೆಗೆ ಒಳಪಟ್ಟ ಕರೋನ ರೋಗಿಗಳು ಈ ತಿಂಗಳಲ್ಲಿ ಗುಣ ಹೊಂದಿರುತ್ತಾರೆ ಎಂದು ವೈದ್ಯಾಧಿಕಾರಿಗಳು ಸಭೆಯಲ್ಲಿ ತಿಳಿಸಿರುತ್ತಾರೆ.

6. ವಾರ್ಡ್–164ರ ವ್ಯಾಪ್ತಿಯಲ್ಲಿ ನವಂಬರ್ ತಿಂಗಳಲ್ಲಿ ಅತಿ ಹೆಚ್ಚು ಮಳೆ ಆಗಿದ್ದ ಪ್ರಯುಕ್ತ ಮಳೆ ಹಾನಿ ಉಂಟಾಗದಂತೆ ರಸ್ತೆಗಳು, ಚರಂಡಿಗಳು ಮತ್ತು ತೋಳು ಚರಂಡಿಗಳನ್ನು ಸ್ವಚ್ಚಗೊಳಿಸಲಾಗಿದ್ದು, ಮಳೆಯ ನೀರು ರಸ್ತೆಯಲ್ಲಿ ನಿಲ್ಲದಂತೆ ಕ್ರಮವಹಿಸಲಾಗಿದೆ. ರಸ್ತೆಗುಂಡಿಗಳನ್ನು ಸಹ ಮುಚ್ಚಲಾಗುತ್ತಿದ್ದು, ಯಾವುದೇ ಅವಘಡಗಳು ಸಂಭವಿಸದಂತೆ ಕ್ರಮವಹಿಸಲಾಗಿದೆ ಎಂದು ವಾರ್ಡ್ ಅಭಿಯಂತರರು ಸಭೆಯಲ್ಲಿ ತಿಳಿಸಿರುತ್ತಾರೆ.

7. ಅತಿವೃಷ್ಠಿ ಮಳೆ ಸಮಯದಲ್ಲಿ ವಾರ್ಡ್ 164ರಲ್ಲಿ ಯಾವುದೇ ಪ್ರಾಣಹಾನಿ ವರದಿಯಾಗಿರುವುದಿಲ್ಲ ಎಂದು ಸಭೆಗೆ ವರದಿ ನೀಡಲಾಗಿರುತ್ತದೆ. ಮುಂದುವರೆದು ಅಭಿವೃದ್ಧಿ ಕಾಮಗಾರಿಗಳಾದ ರಸ್ತೆ ಡಾಂಬರೀಕರಣ ಮತ್ತು ಸಿಮೆಂಟ್ ಕೆಲಸಗಳಾದ ಕಲ್ವರ್ಟ್, ಪಾದಚಾರಿ ರಸ್ತೆ ಎಲ್ಲಾ ಕಾರ್ಯಗಳನ್ನು ಮಳೆ ನಿಂತ ನಂತರ ಕೈಗೊಳ್ಳುವುದಾಗಿ ವಾರ್ಡ್ ಅಭಿಯಂತರರು ಸಭೆಗೆ ತಿಳಿಸಿರುತ್ತಾರೆ. ಮುಂದೆ ಯಾವುದಾದರೂ ದೂರು ಅಹವಾಲುಗಳು ಬಂದಲ್ಲಿ ಸಭೆಯ ಗಮನಕ್ಕೆ ತಂದು ಸಭೆಯಲ್ಲಿ ಚರ್ಚಿಸುವುದಾಗಿ ಅಭಿಯಂತರರು ತಿಳಿಸಿರುತ್ತಾರೆ.

8. ವಾರ್ಡ್ ವ್ಯಾಪ್ತಿಯಲ್ಲಿ ಶ್ರೀ ವಿವೇಕನಂದ ಕಲಾಕೇಂದ್ರ ಸ್ವಯಂ ಸೇವಾ ಸಂಸ್ಥೆಯು 50 ವರ್ಷಗಳಿಂದ ಮಕ್ಕಳ ವಿದ್ಯಾಭ್ಯಾಸ ಹಾಗೂ ವ್ಯಕ್ತಿತ್ವ ವಿಕಾಸನಕ್ಕೆ ಪೂರಕವಾದ ನೂರಾರು ಕಾರ್ಯಕ್ರಮಗಳನ್ನು ಉಚಿತವಾಗಿ ನಿರ್ವಹಿಸಿಕೊಂಡು ಬರುತ್ತದ್ದು,, ಸದರಿ ಸಂಘದ ಚಟುವಟಿಕೆಗಳಿಗೆ ಅನುದಾನದ ಅವಶ್ಯಕತೆಯಿದ್ದು, ಅದರಂತೆ 20-21ನೇ ಸಾಲಿನ ಕ್ರಿಯಾ ಕ್ರಿಯಾಯೋಜನೆಯಲ್ಲಿ ಸಂಘ ಸಂಸ್ಥೆಗಳಿಗೆ ನೀಡುವ ಅನುದಾನದ ಪಟ್ಟಿಯಲ್ಲಿ ಸೇರ್ಪಡೆಯಾಗಿದ್ದು, ಇದೂವರೆಗೂ ಬಿಡುಗಡೆಯಾಗಿರುವುದಿಲ್ಲ. ಸದರಿ ಸಂಸ್ಥೆಯು ಆರ್ಥಿಕ ಸಹಾಯದ ಅನುಸಾರವಾಗಿ ಶೀಘ್ರದಲ್ಲಿ ಅನುದಾನ ಬಿಡುಗಡೆ ಮಾಡಲು ಸಂಸ್ಥೆಯ ಕಾರ್ಯದರ್ಶಿಗಳು ಸಭೆಯಲ್ಲಿ ಕೋರಿರುತ್ತಾರೆ. ಕೋವಿಡ್ ಸಮಯದಲ್ಲಿ ಕಲಾವಿದರು ಆರ್ಥಿಕ ತೊಂದರೆಗೆ ಸಿಲುಕಿದ್ದು, ಸಹಾಯ ಮಾಡಲು ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ, ವಂದನೆಗಳೊಂದಿಗೆ ಈ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 164, ವಿದ್ಯಾಪೀಠ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 164, ವಿದ್ಯಾಪೀಠ

ಪ್ರತಿಯನ್ನು:

1. ಮಾನ್ಯ ಆಯುಕ್ತರು, ಬೃ.ಬೆ.ಮ.ಪಾಲಿಕೆ, ಎನ್. ಆರ್. ವೃತ್ತ ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ & ಘ.ತ್ಯಾ.ನಿ) ರವರ ಮಾಹಿಗಾಗಿ ಸಲ್ಲಿಸಿದೆ.
4. ಮಾನ್ಯ ಉಪ ಆಯುಕ್ತರು ((ಆಡಳಿತ) ರವರ ಮಾಹಿಗಾಗಿ ಸಲ್ಲಿಸಿದೆ.
5. ಮಾನ್ಯ ಜಂಟಿ ಆಯುಕ್ತರು (ದಕ್ಷಿಣ) ರವರ ಮಾಹಿಗಾಗಿ ಸಲ್ಲಿಸಿದೆ.
6. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
8. ವಾರ್ಡ್ ಸಮಿತಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
9. ಕಛೇರಿ ಪ್ರತಿ.